# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸ.ಕಾ.ನಿ.ಅ/ಕಾ.ಪೇ.ಉ.ವಿ/ಬೆಂ/ಪ್ರ.ದ.ಸ/
ಸಭೆಯ ನಡವಳಿ/ಸಂಖ್ಯೆ: 102/2021-22

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಕಾಟನ್‌ಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ : 07/01/2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:-** ದಿನಾಂಕ. 07.01.2022 ರಂದು ನಡೆದ ವಾರ್ಡ್ ಸಂಖ್ಯೆ. 120ರ ಸಮಿತಿ ಸಭೆಯ ನಡವಳಿಗಳು.
**ಉಲ್ಲೇಖ:-** ಆಯುಕ್ತರ ಕಛೇರಿ ಆದೇಶ ಸಂಖ್ಯೆ. ಬಿ12(5)ಪಿ.ಆರ್/35/2020/21,
ದಿ. 21.09.2020.

1. ವಾರ್ಡ್ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಮುನಿಲಕ್ಷ್ಮಿ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಇತರೆ ಸದಸ್ಯರು ಮತ್ತು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಾರಂಭಿಸಲಾಯಿತು.
2. ವಾರ್ಡ್ ಪ್ರದೇಶದಲ್ಲಿ ರಸ್ತೆ ಗುಂಡಿಗಳನ್ನು ಶೀಘ್ರವಾಗಿ ಮುಚ್ಚಲು ಸೂಕ್ತ ಕ್ರಮವಹಿಸಲು ಸೂಚಿಸಿರುತ್ತಾರೆ.
3. ಕಟ್ಟಡದ ತ್ಯಾಜ್ಯ ವಸ್ತುಗಳ ಸಂಗ್ರಹವಿದ್ದು, ಶೀಘ್ರವಾಗಿ ಟ್ರಾಕ್ಟರ್‌ಗಳ ಮೂಲಕ ಹೊರಹಾಕಲು ಕ್ರಮ ವಹಿಸಲು ತಿಳಿಸಿರುತ್ತಾರೆ.
4. ಬೇಸಿಗೆ ಕಾಲ ಪ್ರಾರಂಭವಾಗುತ್ತಿರುವುದರಿಂದ ಕುಡಿಯುವ ನೀರಿನ ವ್ಯವಸ್ಥೆ ಮಾಡುವ ಬಗ್ಗೆ ಚರ್ಚಿಸಲಾಯಿತು.
5. ಮಾನ್ಯ ನೋಡಲ್ ಅಧಿಕಾರಿಯವರು ಮುಂದಿನ ಸಭೆಯಲ್ಲಿ ವಾರ್ಡಿನ ಕುಂದು ಕೊರತೆಗಳ ಬಗ್ಗೆ ಸಮಗ್ರವಾಗಿ ಚರ್ಚಿಸಬೇಕೆಂದು ತಿಳಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

**ನಿರ್ಣಯ:-**

ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಮುಂದಿನ ಸಭೆಯೊಳಗಾಗಿ ಶೀಘ್ರವಾಗಿ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತ್ತು.

ಕಾರ್ಯದರ್ಶಿ
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ. 120
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು :**

1. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಸಲ್ಲಿಸಿದೆ.
3. ಕಾರ್ಯಪಾಲಕ ಅಭಿಯಂತರರು, ಗಾಂಧಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾಟನ್‌ಪೇಟೆ ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಛೇರಿ ಕಡತಕ್ಕೆ.

Scanned with CamScanner